ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೊಂದನೆಯ ಅಧಿವೇಶನ
ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ಕಾಲೇಜು ಕಟ್ಟಡ ಕಾಮಗಾರಿಗಳಿಗೆ ಅನುದಾನ

ಶ್ರೀ ಸುನೀಲ್ ವಲ್ಯಾಪುರ್(ವಿಧಾನಸಭೆಯಿಂದ ಚುನಾಯಿತರಾದವರು ) -

110 (64) ಮಾನ್ಯ ಉಪ ಮುಖ್ಯ ಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಕಲಬುರಗಿ ಜಿಲ್ಲೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಮೂಲಭೂತ ಸೌಲಭ್ಯಗಳು ಹಾಗೂ ಕೊಠಡಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಕಳೆದ 3 ವರ್ಷಗಳಿಂದ ಇದುವರೆವಿಗೂ ಈ ಕಾಲೇಜುಗಳ ಹೆಚ್ಚುವರಿ ಕೊಠಡಿಗಳ ನಿರ್ಮಾಣಕ್ಕೆ ಹಾಗೂ ಮೂಲಭೂತ ಸೌಕರ್ಯಗಳಿಗೆ ಮಂಜೂರಾದ ಹಣ ಎಷ್ಟು; ಎಷ್ಟು ಹಣ ಖರ್ಚಾಗಿದೆ; ಎಷ್ಟು ಕಾಮಗಾರಿ ಪೂರ್ಣಗೊಂಡಿವೆ; ಇನ್ನೂ ಪೂರ್ಣಗೊಳ್ಳಬೇಕಾದ ಕಾಮಗಾರಿಗಳು ಯಾವುವು;

(ಇ) ಕಲಬುರಗಿ ಕಾಲೇಜುಗಳಲ್ಲಿ ಅಗತ್ಯವಿರುವ ಹೆಚ್ಚುವರಿ ಕೊಠಡಿಗಳ ನಿರ್ಮಾಣಕ್ಕೆ ಇನ್ನೂ ಅಗತ್ಯವಿರುವ ಅನುದಾನ ಎಷ್ಟು; ಯಾವ ಕಾಲಮಿತಿಯಲ್ಲಿ ಪೂರೈಸಲಾಗುವುದು?